## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 541
ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್‌ರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 20.08.2026.
ಉತ್ತರಿಸುವ ಸಚಿವರು : ಗೃಹ ಸಚಿವರು

| ವಿಷಯ | ಉತ್ತರ |
|---|---|
| ರಾಯಚೂರು ನಗರ ಹೃದಯಭಾಗದಲ್ಲಿರುವ ಜಿಲ್ಲಾ ಕೇಂದ್ರ ಕಾರಾಗೃಹವನ್ನು ರಾಯಚೂರು ನಗರದ ಹೊರಭಾಗಕ್ಕೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | • ರಾಯಚೂರು ನಗರದ ಹೃದಯಭಾಗದಲ್ಲಿರುವ ಜಿಲ್ಲಾ ಕಾರಾಗೃಹವನ್ನು ನಗರದ ಹೊರಭಾಗಕ್ಕೆ ಸ್ಥಳಾಂತರಿಸುವ ಕುರಿತು ಬಿಜನಗೇರಾ ಗ್ರಾಮದ ಸರ್ವೆ ನಂ.30 ರಲ್ಲಿ 19.15 ಎಕರೆ ಜಮೀನನ್ನು ನೂತನ ಜಿಲ್ಲಾ ಕಾರಾಗೃಹ ನಿರ್ಮಾಣಕ್ಕೆ ಸರ್ಕಾರವು ಮಂಜೂರು ಮಾಡಿರುತ್ತದೆ.<br><br>• 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ (475) ರಲ್ಲಿ ಮಂಗಳೂರು ಜಿಲ್ಲಾ ಕೇಂದ್ರ ಕಾರಾಗೃಹದ ಎರಡನೇ ಹಂತದ ಕಾಮಗಾರಿಯನ್ನು ಮತ್ತು ರಾಯಚೂರು ಜಿಲ್ಲಾ ಕಾರಾಗೃಹಗಳ ನಿರ್ಮಾಣ ಕಾರ್ಯವನ್ನು ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು .ಮಾನ್ಯ ಮುಖ್ಯ ಮಂತ್ರಿಗಳು ಘೋಷಿಸಿರುತ್ತಾರೆ.<br><br>• ರಾಯಚೂರು ಜಿಲ್ಲೆಯ ಬಿಜನಗೇರಾ ಗ್ರಾಮದ ಸರ್ವೆ ನಂ.30 ರಲ್ಲಿ ಮಂಜೂರಾಗಿರುವ 19.15 ಎಕರೆ ಜಮೀನಿನಲ್ಲಿ 500 ಬಂದಿಗಳ ಸಾಮರ್ಥ್ಯದ ನೂತನ ಜಿಲ್ಲಾ ಕಾರಾಗೃಹ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರಿಂದ ರೂ.90.00 ಕೋಟಿಗಳ ಸಮಗ್ರ ಅಂದಾಜು ಪಟ್ಟಿಯನ್ನು ಪಡೆಯಲಾಗಿರುತ್ತದೆ.<br><br>• 2026-27ನೇ ಸಾಲಿನಲ್ಲಿ ಒದಗಿಸಲಾಗಿರುವ ರೂ.7500.00 ಲಕ್ಷಗಳ ಅನುದಾನದಲ್ಲಿ ರಾಯಚೂರು ನೂತನ ಜಿಲ್ಲಾ ಕಾರಾಗೃಹ ನಿರ್ಮಾಣ ಕಾಮಗಾರಿಗೆ ರೂ.500.00 ಲಕ್ಷಗಳ ಅನುದಾನವನ್ನು ನಿಗಧಿಪಡಿಸಿಕೊಂಡು ಕ್ರಿಯಾ ಯೋಜನೆಗೆ ಅನುಮೋದನೆ ಪಡೆಯಲು, ನೂತನ ಕಾರಾಗೃಹ ನಿರ್ಮಾಣದ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ಹಾಗೂ ಅನುದಾನ ಬಿಡುಗಡೆ ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಹೆಚ್‌ಡಿ 216 ಪಿಆರ್‌ಎ 2026**

(ಪ್ರಿಯಾಂಕ್ ಖರ್ಗೆ)
ಗೃಹ ಸಚಿವರು